# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯ ಸಿವಿಲ್ ಸೇವಾ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ಅಭ್ಯರ್ಥಿಗಳಿಗೆ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಒಂದು ಬಾರಿಯ ಕ್ರಮವಾಗಿ ಸಡಿಲಿಸುವ ಕುರಿತು.

**ಓದಲಾಗಿದೆ:** 1.ದಿನಾಂಕ 06.09.2025ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 249 ಸೇನೆನಿ 2025.

2.ದಿನಾಂಕ 29.09.2025ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 262 ಸೇನೆನಿ 2025.

*********

**ಪ್ರಸ್ತಾವನೆ:**

1. ಮೇಲೆ (2) ರಲ್ಲಿ ಓದಲಾದ ದಿನಾಂಕ:29.09.2025ರ ಆದೇಶದಲ್ಲಿ ದಿನಾಂಕ: 06.09.2025ರ ಆದೇಶವನ್ನು ಹಿಂಪಡೆದು, ದಿನಾಂಕ 31.12.2027 ರವರೆಗೆ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ (as a one-time measure) 3 ವರ್ಷಗಳ ಸಡಿಲಿಕೆ ನೀಡಿ ಆದೇಶಿಸಲಾಗಿದೆ.

2. ನಂತರದಲ್ಲಿ ಹಲವಾರು ಉದ್ಯೋಗಾಕಾಂಕ್ಷಿಗಳು, ಜನಪ್ರತಿನಿಧಿಗಳು ಮತ್ತು ಸಂಘ ಸಂಸ್ಥೆಗಳು ಮನವಿ ಸಲ್ಲಿಸಿ ರಾಜ್ಯ ಸಿವಿಲ್ ಸೇವೆಗಳಿಗೆ ಮಾಡುವ ನೇರ ನೇಮಕಾತಿಯಲ್ಲಿ ಗರಿಷ್ಠ ವಯೋಮಿತಿಯಲ್ಲಿ 5 ವರ್ಷಗಳ ಸಡಿಲಿಕೆಯನ್ನು ನೀಡುವಂತೆ ಕೋರಿರುತ್ತಾರೆ. ಸದರಿ ಮನವಿಗಳನ್ನು ಸರ್ಕಾರವು ಪರಿಶೀಲಿಸಿ ಒಂದು ಬಾರಿಗೆ ಮಾತ್ರ ವಯೋಮಿತಿಯಲ್ಲಿ 5 ವರ್ಷಗಳ ಸಡಿಲಿಕೆ ನೀಡಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

A.D.G.P. Admin

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 262 ಸೇನೆನಿ 2025**

**ಬೆಂಗಳೂರು, ದಿನಾಂಕ:29.01.2026**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮೇಲೆ (2)ರಲ್ಲಿ ಓದಲಾದ ದಿನಾಂಕ: 29.09.2025ರ ಆದೇಶವನ್ನು ಹಿಂಪಡೆದು, ಈ ಆದೇಶ ಹೊರಡಿಸಿದ ದಿನಾಂಕದ ನಂತರ ಮುಂದಿನ ದಿನಾಂಕ 31.12.2027 ರವರೆಗೆ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ

DIGP(Admn) HRM-II

--2



ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ (as a one-time measure) 5 ವರ್ಷಗಳ ಸಡಿಲಿಕೆ ನೀಡಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,

(ಆಶಾಕುಮಾರಿ ಎ ಜಿ) 29/01/2026
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು-1).

NR-693

(Fax) GB-250

ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್ ಜನರಲ್
ಆಫ್ ಪೊಲೀಸ್‌ರವರ ಕಾರ್ಯಾಲಯ
ಕರ್ನಾಟಕ ರಾಜ್ಯ, ನೃಪತುಂಗ ರಸ್ತೆ,
ಬೆಂಗಳೂರು – 560001.

**ಕರ್ನಾಟಕ ಸರ್ಕಾರ**
**(ಪೊಲೀಸ್ ಇಲಾಖೆ)**

**ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ ರವರ ಕಛೇರಿ.**
**ಕರ್ನಾಟಕ ರಾಜ್ಯ, ನಂ.02, ನೃಪತುಂಗ ರಸ್ತೆ, ಬೆಂಗಳೂರು – 560001**
ದೂರವಾಣಿ ಸಂಖ್ಯೆ: 080-22942820/2826 ಇ-ಮೇಲ್ ವಿಳಾಸ: kspest1co@gmail.com

ಕಡತ ಸಂಖ್ಯೆ:195/ಸಿಬ್ಬಂದಿ/2020-21(ಭಾಗ-4) ದಿನಾಂಕ: 24.03.2026
ಲಗತ್ತು 01 ಪ್ರತಿ

## ಹಿಂಬರಹ

**ವಿಷಯ:** ನೇರ ನೇಮಕಾತಿಗಳಲ್ಲಿ ಅಭ್ಯರ್ಥಿಗಳಿಗೆ ನಿಗಧಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಒಂದು ಬಾರಿಯ ಕ್ರಮವಾಗಿ ಸಡಿಲಿಸಿರುವ ಕುರಿತು.

****

ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 262 ಸೇನೆನಿ 2025 ದಿನಾಂಕ:29.01.2026ರಲ್ಲಿ ದಿನಾಂಕ:31.12.2027 ರವರೆಗೆ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗಧಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ (as a one-time measure) 05 ವರ್ಷಗಳ ಸಡಿಲಿಕೆ ನೀಡಿ ಆದೇಶಿಸಿದ್ದು, ಸದರಿ ಆದೇಶದ ಪ್ರತಿಯನ್ನು ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ ಈ ಹಿಂಬರಹದೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ.

(ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ಐಪಿಎಸ್)
ಡಿ.ಐ.ಜಿ.ಪಿ(ಆಡಳಿತ)
ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್
ಜನರಲ್ ಆಫ್ ಪೊಲೀಸ್ ರವರ ಪರವಾಗಿ

ಇವರಿಗೆ,

1) ಪೊಲೀಸ್ ಮಹಾನಿರ್ದೇಶಕರು, ನೇಮಕಾತಿ, ಬೆಂಗಳೂರು.
2) ಎಲ್ಲಾ ಘಟಕಾಧಿಕಾರಿಗಳಿಗೆ.

DCP CONTROL ROOM, BENGALURU
O/o. the DG & IGP, N.T.Road, B'lore-1
Messages Received for Transmission
NR No. 693 Time 1320
Date 24/03/26 Sign